All India Radio: Bangalore
National Bulletin In Kannada
30.04.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಜಮ್ಮುವಿನ ತಾವಿ ರೈಲು ನಿಲ್ದಾಣದಿಂದ ಇಂದು ಶ್ರೀನಗರ-ಕಟ್ರಾ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲ್ವೆ ಸೇವೆಗೆ ಚಾಲನೆ ನೀಡಲಿರುವ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
2. ಕರ್ನಾಟಕದ ಬೆಂಗಳೂರಿನಲ್ಲಿ ಭಾರೀ ಮಳೆ ; ಗೋಡೆ ಕುಸಿದು ೭ ಮಂದಿ ಸಾವು : ಗಣ್ಯರಿಂದ ಸಂತಾಪ
3. ಪಶ್ಚಿಮ ಬಂಗಾಳದಲ್ಲಿ ನಡೆದ ೨ನೇ ಹಂತದ ವಿಧಾನಸಭಾ ಚುನಾವಣೆ : ಶೇಕಡ ೯೧.೬೬ ರಷ್ಟು ಮತದಾನ
4. ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ ತಂಡಕ್ಕೆ ಆರು ವಿಕೆಟ್‌ಗಳ ಜಯ

<><><><>

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಜಮ್ಮುವಿನ ತಾವಿ ರೈಲು ನಿಲ್ದಾಣದಿಂದ ಶ್ರೀನಗರ-ಕಟ್ರಾ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಗೆ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕ ಮಾರ್ಗದಲ್ಲಿ ಅಂಜಿ ಸೇತುವೆ ಮತ್ತು ಚೆನಾಬ್ ಸೇತುವೆಯನ್ನು ಅವರು ಪರಿಶೀಲಿಸಲಿದ್ದಾರೆ. ಪ್ರಧಾನ ಮಂತ್ರಿ ಕಾರ್ಯಾಲಯದ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಸಹ ಈ ಸಂದರ್ಭದಲ್ಲಿ ಉಪಸ್ಥಿತರಿರಲಿದ್ದಾರೆ. ಈ ಹಿಂದೆ ಶ್ರೀನಗರದಿಂದ ಶ್ರೀ ಮಾತಾ ವೈಷ್ಣೋ ದೇವಿ ಕಟ್ರಾದವರೆಗೆ ಕಾರ್ಯನಿರ್ವಹಿಸುತ್ತಿದ್ದ ರೈಲು, ಈಗ ಜಮ್ಮು ತಾವಿಗೆ ಸಂಪೂರ್ಣವಾಗಿ ಚಲಿಸಲಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ವಿಸ್ತೃತ ಜಮ್ಮು ತಾವಿ-ಶ್ರೀನಗರ ವಂದೇ ಭಾರತ್ ಎಕ್ಸ್‌ಪ್ರೆಸ್ ಮುಂದಿನ ತಿಂಗಳ ಎರಡನೇ ತಾರೀಖಿನಿಂದ ನಿಯಮಿತ ಸೇವೆ ಆರಂಭಿಸಲಿದೆ. ಹೆಚ್ಚುತ್ತಿರುವ ಜನಪ್ರಿಯತೆ ಮತ್ತು ಬೇಡಿಕೆಯನ್ನು ಪೂರೈಸಲು ವಂದೇ ಭಾರತ್ ಅನ್ನು ಎಂಟು ಬೋಗಿಗಳಿಂದ ಇಪ್ಪತ್ತು ಬೋಗಿಗಳಿಗೆ ಹೆಚ್ಚಿಸಲಾಗಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

<><><><>

ಕರ್ನಾಟಕದ ಬೆಂಗಳೂರಿನಲ್ಲಿ ನಿನ್ನೆ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಬಳಿ ಕಾಂಪೌಂಡ್ ಗೋಡೆ ಕುಸಿದು ಮೂವರು ಮಕ್ಕಳು ಸೇರಿದಂತೆ ಏಳು ಜನರು ಸಾವನ್ನಪ್ಪಿದ್ದಾರೆ. ಭಾರೀ ಮಳೆ, ಬಲವಾದ ಗಾಳಿ ಮತ್ತು ಆಲಿಕಲ್ಲು ಮಳೆಯ ನಡುವೆ ಈ ಘಟನೆ ಸಂಭವಿಸಿದ್ದು, ಮೃತರು ಗೋಡೆಯ ಬಳಿ ಆಶ್ರಯ ಪಡೆದಿದ್ದಾಗ ಈ ಘಟನೆ ಸಂಭವಿಸಿದೆ.. ಏಳು ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪೊಲೀಸರು ಮತ್ತು ತುರ್ತು ಸೇವೆಗಳು ಸ್ಥಳಕ್ಕೆ ಧಾವಿಸಿ, ಅವಶೇಷಗಳ ಅಡಿಯಲ್ಲಿ ಸಿಲುಕಿದ್ದ ಮೃತದೇಹಗಳನ್ನು ಹೊರತೆಗೆದು ಗಾಯಾಳುಗಳನ್ನು ಸ್ಥಳೀಯರ ಸಹಾಯದಿಂದ ರಕ್ಷಿಸಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಥಳಕ್ಕೆ ಭೇಟಿ ನೀಡಿದರು.  ಈ ಸಂದರ್ಭದಲ್ಲಿ ಮೃತರ ಕುಟುಂಬಗಳಿಗೆ ೫ ಲಕ್ಷ ರೂಪಾಯಿ ಪರಿಹಾರವನ್ನು ಅವರು ಘೋಷಣೆ ಮಾಡಿದರು ಹಾಗೂ ಗಾಯಗೊಂಡವರಿಗೆ ಉಚಿತ ಚಿಕಿತ್ಸೆ ನೀಡಬೇಕೆಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಂತರ ಮುಖ್ಯಮಂತ್ರಿ ಬೌರಿಂಗ್ ಆಸ್ಪತ್ರೆಯ ತುರ್ತು ವಿಭಾಗಕ್ಕೆ ಭೇಟಿ ನೀಡಿ, ಘಟನೆಯಲ್ಲಿ ಗಾಯಗೊಂಡವರಿಗೆ ಸರಿಯಾದ ವೈದ್ಯಕೀಯ ಆರೈಕೆ ನೀಡುವಂತೆ ವೈದ್ಯರಿಗೆ ನಿರ್ದೇಶನ ನೀಡಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ತಮ್ಮ ಸಂದೇಶದಲ್ಲಿ, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ ಮತ್ತು ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ

<><><><>

ಪಶ್ಚಿಮ ಬಂಗಾಳದಲ್ಲಿ ನಡೆದ ಎರಡು ಹಂತದ ವಿಧಾನಸಭಾ ಚುನಾವಣೆಯಲ್ಲಿ ದಾಖಲೆಯ ಶೇಕಡಾ ೯೨.೪೭ ರಷ್ಟು ಮತದಾನವಾಗಿದೆ. ಎರಡನೇ ಹಂತದ ಮತದಾನದ ಶೇಕಡಾವಾರು ಪ್ರಮಾಣವು ೯೧.೬೬ ರಷ್ಟಿದ್ದರೆ, ಏಪ್ರಿಲ್ ೨೩ ರಂದು ನಡೆದ ಮೊದಲ ಹಂತದಲ್ಲಿ ಇದು ೯೩.೧೯ ಪ್ರತಿಶತದಷ್ಟಿತ್ತು. ಎರಡು ಹಂತಗಳಲ್ಲಿ ಒಟ್ಟು ಮತದಾನದ ಶೇಕಡಾವಾರು ಪ್ರಮಾಣವು ೯೨.೪೭ ಪ್ರತಿಶತದಷ್ಟಿದೆ. ಮತದಾರರ ಮತದಾನದ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಸ್ವಾತಂತ್ರ್ಯದ ನಂತರ ಪಶ್ಚಿಮ ಬಂಗಾಳದಲ್ಲಿ ಇದುವರೆಗಿನ ಅತ್ಯಧಿಕ ಶೇಕಡಾವಾರು ಮತದಾನಕ್ಕಾಗಿ, ಚುನಾವಣಾ ಆಯೋಗವು ರಾಜ್ಯದ ಪ್ರತಿಯೊಬ್ಬ ಮತದಾರರಿಗೆ ವಂದಿಸುತ್ತದೆ ಎಂದು ಹೇಳಿದ್ದಾರೆ. ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ

ಹಂತದಲ್ಲಿ ನಿನ್ನೆ ೧೪೨ ಸ್ಥಾನಗಳಿಗೆ ಮತದಾನ ನಡೆಯಿತು. ಈ ತಿಂಗಳು ಚುನಾವಣೆ ನಡೆದ ಐದು ವಿಧಾನಸಭಾ ಕ್ಷೇತ್ರಗಳಾದ ಪಶ್ಚಿಮ ಬಂಗಾಳ, ತಮಿಳುನಾಡು, ಪುದುಚೇರಿ, ಕೇರಳ ಮತ್ತು ಅಸ್ಸಾಂಗಳ ಮತ ಎಣಿಕೆ ಮೇ ೪ ರಂದು ನಡೆಯಲಿದೆ.

<><><><>

ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ನಿನ್ನೆ ತಡರಾತ್ರಿ ಕಾರ್ಮಿಕರನ್ನು ಹೊತ್ತೊಯ್ಯುತ್ತಿದ್ದ ಪಿಕಪ್ ವ್ಯಾನ್ ಮಗುಚಿ ಬಿದ್ದ ಪರಿಣಾಮ ೧೨ ಕಾರ್ಮಿಕರು ಸಾವನ್ನಪ್ಪಿದ್ದಾರೆ ಮತ್ತು ೨೦ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.  ಪ್ರಾಥಮಿಕ ಮಾಹಿತಿಯ ಪ್ರಕಾರ, ಧಾರ್ ಜಿಲ್ಲೆಯ ಬಗ್ಗಡ್‌ನಿಂದ ೩೫ ಕಾರ್ಮಿಕರು ಮನೆಗೆ ಹಿಂತಿರುಗುತ್ತಿದ್ದಾಗ ಚಿಕ್ಲಿಯಾ ಕ್ರಾಸಿಂಗ್ ಬಳಿ ಚಾಲಕ ವಾಹನದ ನಿಯಂತ್ರಣ ತಪ್ಪಿದ್ದಾನೆ. ವಾಹನವು ಮಗುಚಿ ಬಿದ್ದು, ಎದುರು ದಿಕ್ಕಿನಿಂದ ಬರುತ್ತಿದ್ದ ಎಸ್‌ಯುವಿ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಘಟನಾ ಸ್ಥಳದಲ್ಲೇ ೧೨ ಮಂದಿ ಸಾವನ್ನಪ್ಪಿದ್ದಾರೆ ಎಂದು ಉಸ್ತುವಾರಿ ಜಿಲ್ಲಾಧಿಕಾರಿ ಅಭಿಷೇಕ್ ಚೌಧರಿ ತಿಳಿಸಿದ್ದಾರೆ. ಗಂಭೀರವಾಗಿ ಗಾಯಗೊಂಡವರನ್ನು ಪ್ರಾಥಮಿಕ ಚಿಕಿತ್ಸೆಯ ನಂತರ ಇಂದೋರ್‌ಗೆ ದಾಖಲಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ತಿರ್ಲಾ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಅಪಘಾತದ ತನಿಖೆ ನಡೆಸುತ್ತಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಈ ಘಟನೆಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರಧಾನಮಂತ್ರಿಯವರು ಮೃತರ ಕುಟುಂಬಕ್ಕೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಾಳುಗಳಿಗೆ ೫೦ ಸಾವಿರ ರೂಪಾಯಿಗಳ ಪರಿಹಾರ ಘೋಷಿಸಿದ್ದಾರೆ. ಘಟನೆ ಬಗ್ಗೆ ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಕೂಡ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಗಳಿಗೆ ತಲಾ ೪ ಲಕ್ಷ ರೂಪಾಯಿ, ಗಂಭೀರವಾಗಿ ಗಾಯಗೊಂಡವರಿಗೆ ತಲಾ ೧ ಲಕ್ಷ ರೂಪಾಯಿ ಮತ್ತು ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿಗಳ ಪರಿಹಾರ ಘೋಷಿಸಿದ್ದಾರೆ.

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು  ಇಟಲಿ ರಕ್ಷಣಾ ಸಚಿವ ಗೈಡೋ ಕ್ರೋಸೆಟ್ಟೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಸಭೆಯಲ್ಲಿ ಉಭಯ ನಾಯಕರು ಎರಡೂ ದೇಶಗಳ ನಡುವಿನ ರಕ್ಷಣಾ ಸಹಕಾರಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ

ಬಗ್ಗೆ ಚರ್ಚಿಸಲಿದ್ದಾರೆ. ಅಲ್ಲದೆ, ಬದಲಾಗುತ್ತಿರುವ ಭದ್ರತಾ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅವರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ. ೨೦೨೩ ರ ಅಕ್ಟೋಬರ್‌ನಲ್ಲಿ ರಕ್ಷಣಾ ಸಚಿವರು ರೋಮ್‌ಗೆ ಭೇಟಿ ನೀಡಿದ ನಂತರ ಭಾರತ ಮತ್ತು ಇಟಲಿ ನಡುವಿನ ರಕ್ಷಣಾ ಸಹಕಾರ ಮತ್ತಷ್ಟು ವೇಗವನ್ನು ಪಡೆದುಕೊಂಡಿದೆ. ಇದು ಇಟಲಿಯ ರಕ್ಷಣಾ ಸಚಿವರ ಮೊದಲ ಭಾರತ ಪ್ರವಾಸವಾಗಿದೆ. ೨೦೨೬ ರ ಜನವರಿಯಲ್ಲಿ 'ಭಾರತ-ಐರೋಪ್ಯ ಒಕ್ಕೂಟ  ರಕ್ಷಣಾ ಮತ್ತು ವ್ಯೂಹಾತ್ಮಕ ಪಾಲುದಾರಿಕೆ'ಗೆ ಸಹಿ ಹಾಕಿರುವುದು ಬೆಳೆಯುತ್ತಿರುವ ಕಾರ್ಯತಂತ್ರದ ಒಮ್ಮತವನ್ನು ಪ್ರತಿಬಿಂಬಿಸುತ್ತದೆ ಮತ್ತು ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ರಕ್ಷಣಾ ಕೈಗಾರಿಕಾ ಸಹಕಾರಕ್ಕೆ ಹೆಚ್ಚಿನ ಉತ್ತೇಜನ ನೀಡಿದೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಲಡಾಖ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ನಾಳೆ ಬುದ್ಧ ಪೂರ್ಣಿಮೆಯ ಸಂದರ್ಭದಲ್ಲಿ ಪ್ರಾರಂಭವಾಗುವ ಭಗವಾನ್ ಬುದ್ಧನ ಪವಿತ್ರ ಅವಶೇಷಗಳ ಮೊದಲ ಅಂತಾರಾಷ್ಟ್ರೀಯ ಪ್ರದರ್ಶನದಲ್ಲಿ ಭಾಗವಹಿಸಲಿದ್ದಾರೆ. ಈ ಪ್ರದರ್ಶನದಲ್ಲಿ ವಿಶ್ವದ ವಿವಿಧ ಭಾಗಗಳಿಂದ ಬಂದ ಭಕ್ತರು ಬುದ್ಧನ ಅವಶೇಷಗಳಿಗೆ ಪೂಜೆ ಸಲ್ಲಿಸಲಿದ್ದಾರೆ ಎಂದು ಅಮಿತ್ ಶಾ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

<><><><>

೨೦೨೬-೨೭ರ ಹಣಕಾಸು ವರ್ಷದಲ್ಲಿ ೫೧ ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಹೂಡಿಕೆಯೊಂದಿಗೆ ೬೨ ಹಡಗುಗಳನ್ನು ಸೇರ್ಪಡೆಗೊಳಿಸುವ ನಿಟ್ಟಿನಲ್ಲಿ ಭಾರತವು ಮುನ್ನಡೆಯುತ್ತಿದೆ ಎಂದು ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ತಿಳಿಸಿದ್ದಾರೆ. ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದಂತೆ ನವದೆಹಲಿಯಲ್ಲಿ ನಡೆದ ಉನ್ನತ ಮಟ್ಟದ ಅಂತರ್-ಸಚಿವಾಲಯದ ಪರಾಮರ್ಶನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಬಾಹ್ಯ ಅಡೆತಡೆಗಳ ವಿರುದ್ಧ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು ದೇಶದ ಹಡಗು ಸಾಮರ್ಥ್ಯದ ತುರ್ತು ವಿಸ್ತರಣೆಗೆ ಕರೆ ನೀಡಿದ್ದಾರೆ. ಶಿಪ್ಪಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಮತ್ತು ತೈಲ ಸಾರ್ವಜನಿಕ ವಲಯದ ಉದ್ಯಮಗಳ ನಡುವಿನ ಜಂಟಿ ಸಹಭಾಗಿತ್ವದಲ್ಲಿ ೫೯ ಹಡಗುಗಳನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯನ್ನು ಸಹ ಅವರು ಪರಿಶೀಲಿಸಿದ್ದಾರೆ.

ಭಾರತೀಯ ನಾವಿಕರ ಸುರಕ್ಷತೆ ಮತ್ತು ಭದ್ರತೆಯು ಸರ್ಕಾರದ ಪ್ರಮುಖ ಆದ್ಯತೆಯಾಗಿ ಉಳಿದಿದೆ ಎಂದು ಅವರು ಪುನರುಚ್ಚರಿಸಿದ್ದಾರೆ.

<><><><>

ಅನಿಶ್ಚಿತತೆಯ ಜಗತ್ತಿನಲ್ಲಿ ರಾಷ್ಟ್ರೀಯ ಹಿತಾಸಕ್ತಿಗಳನ್ನು ಮುನ್ನಡೆಸಲು ಮತ್ತು ರಾಷ್ಟ್ರೀಯ ಗುರಿಗಳನ್ನು ಸಾಧಿಸಲು ಭಾರತೀಯ ರಾಜತಾಂತ್ರಿಕತೆ ಸನ್ನದ್ಧವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಸಮ್ಮೇಳನದಲ್ಲಿ ಭಾರತದ ಹೈಕಮಿಷನರ್‌ಗಳು ರಾಯಭಾರಿಗಳು ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹಿರಿಯ ಅಧಿಕಾರಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಕಳೆದ ದಶಕದಲ್ಲಿ ವಿಶ್ವದೊಂದಿಗೆ ಭಾರತದ ಒಡನಾಟವು ಗಣನೀಯವಾಗಿ ವಿಸ್ತರಿಸಲ್ಪಟ್ಟಿರುವುದನ್ನು ಈ ಸಂವಾದ ಗುರುತಿಸಿದೆ ಎಂದು ಇದೇ ವೇಳೆ ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಅಭಿಪ್ರಾಯಟ್ಟಿದ್ದಾರೆ.

<><><><>

ಮುಂಬೈನ ವಾಂಖೇಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ ತಂಡ ಆರು ವಿಕೆಟ್‌ಗಳ ಜಯ ಸಾಧಿಸಿತು. ಮುಂಬೈ ಇಂಡಿಯನ್ಸ್ ನೀಡಿದ್ದ ೨೪೪ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಸನ್‌ರೈಸರ್ಸ್ ಹೈದರಾಬಾದ್ ೧೮.೨ ಓವರ್‌ಗಳಲ್ಲಿ ೪ ವಿಕೆಟ್‌ಗೆ ೨೪೯ ರನ್ ಗಳಿಸಿತು. ಸನ್‌ರೈಸರ್ಸ್ ಹೈದರಾಬಾದ್ ಪರ ಟ್ರಾವಿಸ್ ಹೆಡ್ ೩೦ ಎಸೆತಗಳಲ್ಲಿ ೭೬ ರನ್ ಗಳಿಸಿದರೆ, ಹೆನ್ರಿಕ್ ಕ್ಲಾಸೆನ್ ೬೫ ರನ್‌ಗಳೊಂದಿಗೆ ಅಜೇಯರಾಗಿ ಉಳಿದರು. ಮುಂಬೈ ಇಂಡಿಯನ್ಸ್ ಪರ ಎಎಂ ಗಜನ್‌ಫರ್ ೨ ವಿಕೆಟ್‌ಗಳನ್ನು ಕಬಳಿಸಿದರು. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>